3033:(4103)

ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ): ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಹೆಲ್ತ್ ಪ್ರಾಜೆಕ್ಟ್‌ಗೆ ಸೇರಿರುವ ತೀರ್ಥಹಳ್ಳಿಯ ಕೆ.ಸಿ. ಆಸ್ಪತ್ರೆಯ ಅಭಿವೃದ್ಧಿ ಕಾಮಗಾರಿಗಳು ಯಾವುವು. ಇದಕ್ಕೆ ಮಂಜೂರು ಮಾಡಿರುವ ಅನುದಾನ ಎಷ್ಟು

ಆ) ಈ ಬಗ್ಗೆ ಈಗಾಗಲೇ ಮಾಡಿದ ವೆಚ್ಚ ಎಷ್ಟು?

ಇ) ಈ ಯೋಜನೆಯ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು?

ಡಾ|| ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ತೀರ್ಥಹಳ್ಳಿ ತಾಲ್ಲೂಕು ಮಟ್ಟದ ಆಸ್ಪತ್ರೆಯ ನವೀಕರಣ ಮತ್ತು ವಿಸ್ತರಣಾ ಕಾಮಗಾರಿಯು ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿಯಲ್ಲಿ ಸೇರಲ್ಪಟ್ಟಿದೆ. ಈ ಕಾಮಗಾರಿಗೆ ವಿವರವಾದ ನಕ್ಷೆ ಮತ್ತು ಅಂದಾಜು 181.64 ಲಕ್ಷಗಳಿಗೆ ಮಂಜೂರಾತಿ ನೀಡಿದ್ದು ಗುತ್ತಿಗೆ ಕಛೇರಿಗಳನ್ನು ವಿಶ್ವಬ್ಯಾಂಕ್ ಪೂರ್ವಭಾವಿ ಅನುಮತಿಗೆ ಸಲ್ಲಿಸಲಾಗಿದೆ. ಅನುಮೋದನೆಗೊಂಡ ನಂತರ ಗುತ್ತಿಗೆ ಕರೆದು ಕಾಮಗಾರಿ ಕೈಗೊಳ್ಳಲಾಗುವುದು.

ಆ) ಕಾಮಗಾರಿಗಳು ಇನ್ನು ಮುಂದೆ ಪ್ರಾರಂಭವಾಗಬೇಕಾಗಿದೆ.

ಇ) ಈ ಕಾಮಗಾರಿಯನ್ನು 1999ರ ಫೆಬ್ರವರಿ ಅಂದಿಯಲ್ಲಿ ಪ್ರಾರಂಭಿಸುವ ನಿರೀಕ್ಷೆ ಇದೆ.

ಶನಿವಾರ ಸಂತೆ ಮತ್ತು ಸೋಮವಾರ ಪೇಟೆ ಕುಡಿಯುವ ನೀರಿನ ಅಭಾವ

3034:(4107)

ಶ್ರೀ ಎಂ.ಪಿ.ಅಪ್ಪಚ್ಚು ರಂಜನ್ (ಸೋಮವಾರಪೇಟೆ) ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶನಿವಾರ ಸಂತೆಯಲ್ಲಿ ಕುಡಿಯುವ ನೀರಿನ ಅಭಾವವನ್ನು ಪರಿಹರಿಸಲು ಅದರ ನಿವಾರಣೆಗಾಗಿ ಸರ್ಕಾರ ಭರವಸೆ ನೀಡಿದ್ದು ನಿಜವೇ. ಹಾಗಿದ್ದಲ್ಲಿ ಯಾವುದೇ ಕ್ರಮ

ಕೈಗೊಳ್ಳದಿರಲು ಕಾರಣವೇನು?

ಅ) ಸೋಮವಾರ ಪೇಟೆಯ ಸುಂಟಿಕೊಪ್ಪದಲ್ಲಿ ಕುಡಿಯುವ ನೀರಿನ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ ಆ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಇ) ಸೋಮವಾರ ಪೇಟೆ ಪಟ್ಟಣದಲ್ಲಿ ಕುಡಿಯುವ ನೀರಿನ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ. ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಹೌದು. ಶನಿವಾರ ಸಂತೆ ಗ್ರಾಮಕ್ಕೆ ರೂ.11.00 ಲಕ್ಷ ಅಂದಾಜು ಮೊತ್ತದ ಕೊಳವೆನೀರು ಸರಬರಾಜು (ಅಭಿವೃದ್ಧಿ) ಯೋಜನೆಗೆ ಈಗಾಗಲೇ ಸರ್ಕಾರದಿಂದ ಅನುಮೋದನೆ ನೀಡಲಾಗಿದ್ದು, 1998-99ನೇ ಸಾಲಿಗೆ ರೂ.4.50 ಲಕ್ಷ ಅನುದಾನ ಒದಗಿಸಲಾಗಿದೆ ಹಾಗೂ ಕೊಡಗು ಜಿಲ್ಲಾ ಪಂಚಾಯತಿಗೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ನಿರ್ದೇಶಿಸಲಾಗಿದೆ.

ಆ) ಸುಂಟಿಕೊಪ್ಪ ಗ್ರಾಮಕ್ಕೆ ಸಮರ್ಪಕ ಕುಡಿಯುವ ನೀರು ಸರಬರಾಜು ವ್ಯವಸ್ಥೆಗಾಗಿ ಯೋಜನೆಯನ್ನು ತಯಾರಿಸಲಾಗಿದ್ದು, ಸದರಿ ಯೋಜನೆಯು ಸಾರ್ವಜನಿಕ ಆರೋಗ್ಯ ತಾಂತ್ರಿಕ ಇಲಾಖೆಯ ತಾಂತ್ರಿಕ ಪರಿಶೀಲನೆಯಲ್ಲಿದೆ.

ಇ) ವಿದ್ಯುತ್ ಪೂರೈಕೆಯ ಅಡಚಣೆಗಳಿಂದಾಗಿ ಸೋಮವಾರ ಪೇಟೆಯಲ್ಲಿ ಸ್ವಲ್ಪಮಟ್ಟಿಗೆ ಕುಡಿಯುವ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಈ ಕುರಿತು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಮಾಗಡಿ ವಿಧಾನ ಸಭಾ ಕ್ಷೇತ್ರದ ಗ್ರಾಮಗಳಿಗೆ ನೀರು ಸರಬರಾಜು.

3035:(4136)

ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ವಿಧಾನ ಸಭಾ ಕ್ಷೇತ್ರದ ಎಷ್ಟು ಗ್ರಾಮಗಳಿಗೆ ಕಿರು ನೀರು ಸರಬರಾಜು ಯೋಜನೆ ಮೂಲಕ ಕುಡಿಯಲು ನೀರು ಒದಗಿಸಲಾಗಿದೆ; ಆ ಗ್ರಾಮಗಳು ಯಾವುವು? ಎಷ್ಟು ಗ್ರಾಮಗಳಿಗೆ ಕಿರು ನೀರು ಸರಬರಾಜು ಯೋಜನೆಯನ್ನು ಅಳವಡಿಸಬೇಕಾಗಿದೆ